# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 490 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ. ಅ. ದೇವೇಗೌಡ (ಪದವೀಧರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 12.12.2018 |
| 4) | ಉತ್ತರಿಸುವವರು | ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು |

*****

| | ಪ್ರಶ್ನೆ | ಉತ್ತರ |
|---|---|---|
| ಅ] | ರಾಜ್ಯದಲ್ಲಿ ನಿರುದ್ಯೋಗಿ ಪದವೀಧರರಿಗೆ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. | ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ನಿರುದ್ಯೋಗಿ ಪದವೀಧರರನ್ನೂ ಒಳಗೊಂಡಂತೆ ಎಲ್ಲ ಉದ್ಯೋಗಾಕಾಂಕ್ಷಿಗಳಿಗೆ ನೀಡಲಾಗುತ್ತಿರುವ ತರಬೇತಿ ವಿವರಗಳನ್ನು ಅನುಬಂಧ ರಲ್ಲಿ ನೀಡಲಾಗಿದೆ. |
| ಆ] | ನಿರುದ್ಯೋಗಿ ಪದವೀಧರರಿಗೆ ಅವರುಗಳು ಯಾವುದಾರೂ ಉದ್ಯೋಗದಲ್ಲಿ ನಿರತರಾಗುವವರೆಗೆ ನಿರುದ್ಯೋಗ ಭತ್ಯೆಯನ್ನು ನೀಡಲಾಗುವುದೇ; ನೀಡದಿದ್ದಲ್ಲಿ ಕಾರಣವೇನು? | ಇಲ್ಲ. |

**ಸಂಖ್ಯೆ:ಕೌಉಜೀಇ 49 ಕೌಗುಪ್ರ 2018**

(ಆರ್.ವಿ. ದೇಶಪಾಂಡೆ)
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

# ಅನುಬಂಧ

**ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ನಿರುದ್ಯೋಗಿ ಪದವೀಧರರನ್ನೂ ಒಳಗೊಂಡಂತೆ ಎಲ್ಲ ಉದ್ಯೋಗಾಕಾಂಕ್ಷಿಗಳಿಗೆ ನೀಡಲಾಗುತ್ತಿರುವ ತರಬೇತಿ ವಿವರಗಳು:-**

**ಉದ್ಯೋಗ ಮತ್ತು ತರಬೇತಿ ಇಲಾಖೆ:**

- ಸರ್ಕಾರದ ವಿವಿಧ ಇಲಾಖೆಗಳ ಬಹುತೇಕ ಹುದ್ದೆಗಳಿಗೆ ನೇರ ನೇಮಕಾತಿ / ನೇಮಕಾತಿ ಪರೀಕ್ಷೆ ಮೂಲಕ ಅರ್ಹ ಅಭ್ಯರ್ಥಿಗಳ ಆಯ್ಕೆ ಮಾಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ, ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ನೋಂದಾಯಿಸಿದ ಅಭ್ಯರ್ಥಿಗಳಿಗೆ ಸದರಿ ನೇಮಕಾತಿ ಪರೀಕ್ಷೆಗಳನ್ನು ವಿಶ್ವಾಸದಿಂದ ಎದುರಿಸುವಂತಾಗಲು ಎಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ **'ಸ್ಟಡಿ ಸರ್ಕಲ್'** ಪ್ರಾರಂಭಿಸಲಾಗಿದೆ. ಈ ಕೇಂದ್ರಗಳು ನೇಮಕಾತಿ ಪರೀಕ್ಷೆ ತೆಗೆದುಕೊಂಡಿರುವ ಅಭ್ಯರ್ಥಿಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿಗಳನ್ನು ಆಯೋಜಿಸುತ್ತಿವೆ. ಉದ್ಯೋಗಾಕಾಂಕ್ಷಿಗಳ ಉಪಯೋಗಕ್ಕಾಗಿ ನೇಮಕಾತಿ ಪರೀಕ್ಷೆ ಮತ್ತು ತರಬೇತಿಗೆ ಸಂಬಂಧಿಸಿದ ಪುಸ್ತಕಗಳನ್ನೊಳಗೊಂಡ 'ಪುಸ್ತಕ ಭಂಡಾರ'ವನ್ನು ಸಹ ನೆಲೆಗೊಳಿಸಲಾಗಿದೆ.
- ಖಾಸಗಿ ಕ್ಷೇತ್ರದಲ್ಲಿನ ವಿಪುಲ ಅವಕಾಶಗಳನ್ನು ಉದ್ಯೋಗಾಕಾಂಕ್ಷಿಗಳಿಗೆ ತಲುಪಿಸಲು ಉದ್ಯೋಗ ಮೇಳಗಳನ್ನು ಆಯೋಜಿಸುತ್ತಿದ್ದು, ಇದರ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗದಾತರೊಂದಿಗೆ ನೇರ ಸಂಪರ್ಕ ಕಲ್ಪಿಸಲಾಗುತ್ತಿದೆ.

**ಕೌಶಲ್ಯ ಮಿಷನ್:**

- ಕೌಶಲ್ಯ ಮಿಷನ್ ನಿಂದ ಅನುಷ್ಠಾನಗೊಳಿಸುತ್ತಿರುವ ಮುಖ್ಯಮಂತ್ರಿಗಳ ಕೌಶಲ್ಯ ಯೋಜನೆಯಡಿ koushalkar.com ವೆಬ್ ಪೋರ್ಟಲ್ ನಲ್ಲಿ ನೋಂದಣಿಯಾದ ಅಭ್ಯರ್ಥಿಗಳಿಗೆ ತರಬೇತಿ ನೀಡಿ, ಉದ್ಯೋಗ ಕೈಗೊಳ್ಳಲು ಅನುಕೂಲ ಕಲ್ಪಿಸಲಾಗುತ್ತಿದೆ. ಈ ವರೆಗೆ 8.94ಲಕ್ಷ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಿರುತ್ತಾರೆ.
- ಪ್ರಧಾನ ಮಂತ್ರಿಗಳ ಕೌಶಲ್ಯವಿಕಾಸಯೋಜನೆಯಡಿ ತರಬೇತಿ ನೀಡಿ, ಉದ್ಯೋಗ ಕೈಗೊಳ್ಳಲು ಅನುಕೂಲ ಕಲ್ಪಿಸಲಾಗುತ್ತಿದೆ.

**ಸಿಡಾಕ್:**

- ರಾಜ್ಯದ ಯುವಜನತೆಗೆ ಉದ್ಯಮಶೀಲತಾ ಮಾರ್ಗದರ್ಶನ ಹಾಗೂ ಸರ್ಕಾರಿ ಯೋಜನೆಗೆ ಹೊರತುಪಡಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಹೊಸದಾಗಿ ಬ್ಯಾಂಕ್ ಸಾಲಕ್ಕಾಗಿ ಅರ್ಜಿ ಸಲ್ಲಿಸುವ ಆಸಕ್ತರಿಗೆ, ಸೂಕ್ತ ಮಾರ್ಗದರ್ಶನ ನೀಡಲು 2017-18ರ ಸಾಲಿನಿಂದ ದಿಶಾಯೋಜನೆಯನ್ನು ಪ್ರಾರಂಭಿಸಿದ್ದು, 2018-19ರ ಸಾಲಿಗೆ ಸದರಿ ಯೋಜನೆಯನ್ನು ಎಲ್ಲ 30 ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ.

**ರಾಷ್ಟ್ರೀಯ ನಗರ ಜೀವನೋಪಾಯ ಮಿಷನ್:**

- ಡೇ-ನಲ್ಮ್ ಯೋಜನೆಯ ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ ಉಪಘಟಕದಡಿ ತರಬೇತಿ ನೀಡಿ ಉದ್ಯೋಗ ಕೈಗೊಳ್ಳಲು ಅನುಕೂಲ ಕಲ್ಪಿಸಲಾಗುವುದು.

**ಸಂಜೀವಿನಿ- ಕೆಎಸ್‌ಆರ್‌ಎಲ್‌ಪಿಎಸ್:**

- ಡಿಡಿಯುಜಿಕೆವೈ ಹಾಗೂ ರಾಜೀವ್ ಗಾಂಧಿ ಚೈತನ್ಯ ಯೋಜನೆ ಹಾಗೂ ರುಡ್‌ಸೆಟಿ ಯೋಜನೆಯಡಿ ತರಬೇತಿಯನ್ನು ನೀಡಿ ವೇತನ ಉದ್ಯೋಗ ಹಾಗೂ ಸ್ವಯಂ ಉದ್ಯೋಗಗಳನ್ನು ಪಡೆಯಲು ಅನುಕೂಲ ಕಲ್ಪಿಸಲಾಗುವುದು.